# ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತ

ನಂ.11, ಬ್ಲ್ಯೂಕ್ರಾಸ್ ಚೇಂಬರ್ಸ್, 4ನೇ ಮಹಡಿ, ಇನ್‌ಫೆಂಟ್ರಿ ಅಡ್ಡ ರಸ್ತೆ, ಬೆಂಗಳೂರು-1

ಕ್ರ.ಸಂ:ಕೆಓಎಫ್:ಮಾಸಅ:ನೇಪ್ರ/1471 /2022-23 ದಿನಾಂಕ: 10.03.2023

**ನೇಮಕಾತಿ ಪ್ರಕಟಣೆ**

ಮಹಾಮಂಡಳದ ಕೇಂದ್ರ ಕಛೇರಿ ಹಾಗು ಇದರ ಘಟಕಗಳಲ್ಲಿ ಖಾಲಿ ಇರುವ ವಿವಿಧ ವೃಂದದ 20 ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಖುದ್ದಾಗಿ/ಅಂಚೆ/ಕೊರಿಯರ್ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಹುದ್ದೆಗಳ ವಿವರಗಳು ಈ ಕೆಳಕಂಡಂತಿರುತ್ತವೆ.

| ವರ್ಗ | ಕ್ರ.ಸಂ | ಹುದ್ದೆಯ ಹೆಸರು | ವಿದ್ಯಾರ್ಹತೆ | ವೇತನ ಶ್ರೇಣಿ | ಕೆಲಸದ ಅನುಭವ | ಹುದ್ದೆಗಳ ಸಂಖ್ಯೆ |
|---|---|---|---|---|---|---|
| I | 1 | ಸಹಾಯಕ ಪ್ರಧಾನ ವ್ಯವಸ್ಥಾಪಕರು<br>Asst.General Manager | ಅಂಗೀಕೃತ ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯದಿಂದ ಎಂ.ಎಸ್ಸಿ., ಕೃಷಿ (ಕೃಷಿ ಮಾರಾಟ/ಬೀಜ ತಂತ್ರಜ್ಞಾನ/ಆಗ್ರೋನಮಿ/ ಅಗ್ರಿಕಲ್ಚರ್ ಎಕ್ಸಟೆನ್ಷನ್/ ಅಗ್ರಿಕಲ್ಚರಲ್ ಎಕನಾಮಿಕ್ಸ್ /ಸಾಯಿಲ್ ಸೈನ್ಸ್ ವಿಷಯದಲ್ಲಿ ಸ್ನಾತಕೋತ್ತರ ಪದವಿ)<br>**ಅಥವಾ**<br>ಇಂಡಿಯನ್ ಇನ್‌ಸ್ಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಇನ್‌ಸ್ಟ್ಯೂಟ್ ಆಫ್ ರೂರಲ್ ಮ್ಯಾನೇಜ್ ಮೆಂಟ್,ಆನಂದ್,ಗುಜರಾತ್ ಇಲ್ಲಿನ ಎಂಬಿಎ ಸ್ನಾತಕೋತ್ತರ ಪದವಿ.<br>**ಅಥವಾ**<br>ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಅಡ್ಮಿನಿಸ್ಟ್ರೇಷನ್/ ಫೈನಾನ್ಸ್/ಮಾರ್ಕೆಟಿಂಗ್/ಬ್ಯುಸಿನೆಸ್ ಮ್ಯಾನೇಜ್‌ಮೆಂಟ್ /ಕೃಷಿ ವಿಷಯದಲ್ಲಿ ಎಂ.ಬಿ.ಎ ಸ್ನಾತಕೋತ್ತರ ಪದವಿ.<br>ಕಂಪ್ಯೂಟರ್ ಕಾರ್ಯಾಚರಣೆಯ ಪೂರ್ಣ ಪರಿಜ್ಞಾನ ಹೊಂದಿರತಕ್ಕದ್ದು. | 74400-109600 | ಪ್ರತಿಷ್ಠಿತ ಸಂಸ್ಥೆಗಳಲ್ಲಿ ಹಿರಿಯ ಹುದ್ದೆಗಳಲ್ಲಿ ಅಂದರೆ - ಅಸಿಸ್ಟೆಂಟ್ ಜನರಲ್ ಮ್ಯಾನೇಜರ್/ ಡೆಪ್ಯೂಟಿ ಜನರಲ್ ಮ್ಯಾನೇಜರ್/ಜನರಲ್ ಮ್ಯಾನೇಜರ್ ಅಥವಾ ಈ ಹುದ್ದೆಗಳ ಸಮಾನಾಂತರ ಹುದ್ದೆಗಳಲ್ಲಿ ಕನಿಷ್ಠ 5 ವರ್ಷಗಳು ಅನುಭವ | 01 |
| II | 2 | ಸಹಾಯಕ ವ್ಯವಸ್ಥಾಪಕರು (ಪ್ರಕ್ಯೂರ್‌ಮೆಂಟ್ & ಇನ್‌ಪುಟ್)<br>Asst. Manager (P&I) | ಅಂಗೀಕೃತವಿಶ್ವವಿದ್ಯಾನಿಲಯದಿಂದ M.Sc.,Agri. (ಆಗ್ರೋನಮಿ/ಸೀಡ್‌ಟೆಕ್ನಾಲಜಿ/ಪ್ಲಾಂಟ್ ಬ್ರೀಡಿಂಗ್ & ಜೆನೆಟಿಕ್ಸ್) ಸ್ನಾತಕೋತ್ತರ ಪದವಿ | 43100-83900 | 5 ವರ್ಷಗಳು | 02 |
| | 3 | ಸಹಾಯಕ ವ್ಯವಸ್ಥಾಪಕರು (ಗುಣಭರವಸೆ)<br>Asst. Manager (Quality Assurance Dept) | ಅಂಗೀಕೃತ ವಿಶ್ವವಿದ್ಯಾನಿಲಯದಿಂದ M.Sc (ಕೆಮಿಸ್ಟ್ರಿ/ಬಯೋಕೆಮಿಸ್ಟ್ರಿ/ಬಯೋಟೆಕ್/ಫುಡ್ ಸೈನ್ಸ್‌ನಲ್ಲಿ ಸ್ನಾತಕೋತ್ತರ ಪದವಿ. ಪಿಹೆಚ್‌ಡಿ ಮಾಡಿದವರಿಗೆ/ಆಯಿಲ್ ಮಿಲ್‌ನಲ್ಲಿ ಅನುಭವ ಇದ್ದವರಿಗೆ ಆದ್ಯತೆ | 43100-83900 | 5 ವರ್ಷಗಳು | 01 |
| | 4 | ಸಹಾಯಕ ವ್ಯವಸ್ಥಾಪಕರು (ಮಾರುಕಟ್ಟೆ)<br>Asst. Manager (Marketing) | ಅಂಗೀಕೃತ ವಿಶ್ವವಿದ್ಯಾನಿಲಯದಿಂದ MBA (Mktg) ಅಥವಾ ಸಮಾನಾಂತರ ಸ್ನಾತಕೋತ್ತರ ಪದವಿ.<br>FMCG/ಖಾದ್ಯ ತೈಲ ಮಾರುಕಟ್ಟೆಯಲ್ಲಿ ಅನುಭವ ಇದ್ದವರಿಗೆ ಆದ್ಯತೆ. | 43100-83900 | 5 ವರ್ಷಗಳು | 01 |
| III | 5 | ಮಾರುಕಟ್ಟೆ ಅಧಿಕಾರಿಗಳು<br>Marketing Officers | ಅಂಗೀಕೃತ ವಿಶ್ವವಿದ್ಯಾನಿಲಯದಿಂದ MBA (Mktg) ಅಥವಾ ಸಮಾನಾಂತರ ಸ್ನಾತಕೋತ್ತರ ಪದವಿ.<br>FMCG/ಖಾದ್ಯ ತೈಲ ಮಾರುಕಟ್ಟೆಯಲ್ಲಿ ಅನುಭವ ಇದ್ದವರಿಗೆ ಆದ್ಯತೆ. | 33450-62600 | 3 ವರ್ಷಗಳು | 09 |
| IV | 6 | ಕಾರ್ಯನಿರ್ವಾಹಕರು (ತಾಂತ್ರಿಕ)<br>Executive (Technical) | ತಾಂತ್ರಿಕ ಶಿಕ್ಷಣ ಮಂಡಳಿಯಿಂದ ಮಾನ್ಯತೆ ಪಡೆದ ವಿದ್ಯಾಸಂಸ್ಥೆಗಳಿಂದ ಡಿಪ್ಲೋಮಾದಲ್ಲಿ ಎಲೆಕ್ಟ್ರಿಕಲ್/ ಮೆಕಾನಿಕಲ್ ಇಂಜಿನಿಯರಿಂಗ್ ವಿದ್ಯಾರ್ಹತೆ ಅಥವಾ ಬ್ಯಾಚುಲರ್ ಆಫ್ ಇಂಜಿನಿಯರಿಂಗ್ ನಲ್ಲಿ ಎಲೆಕ್ಟ್ರಿಕಲ್/ಮೆಕಾನಿಕಲ್ ವಿದ್ಯಾರ್ಹತೆ. ಆಯಿಲ್ ಮಿಲ್‌ನಲ್ಲಿ ಅನುಭವ ಇದ್ದವರಿಗೆ ಆದ್ಯತೆ. | 27650-52650 | 3 ವರ್ಷಗಳು | 02 |
| V | 7 | ಸಹಾಯಕ ಕಾರ್ಯನಿರ್ವಾಹಕರು<br>Asst. Executive | ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪಡೆದ ಬಿಕಾಂ/ಬಿಬಿಎ/ಬಿಬಿಎಂ/ಬಿಎಸ್ಸಿ ಪದವಿ | 21400-42000 | 2 ವರ್ಷಗಳು | 03 |
| | 8 | ಸಹಾಯಕ ಕಾರ್ಯನಿರ್ವಾಹಕರು (ಗುಣಭರವಸೆ)/ Asst. Executive, (Quality Assurance Dept) | B.Sc., (ಕೆಮಿಸ್ಟ್ರಿ/ಬಯೋ ಕೆಮಿಸ್ಟ್ರಿ/ ಬಯೋ ಟೆಕ್/ಫುಡ್ ಸೈನ್ಸ್) ಪದವಿ. ಆಯಿಲ್ ಮಿಲ್‌ನಲ್ಲಿ ಅನುಭವ ಇದ್ದವರಿಗೆ ಆದ್ಯತೆ. | 21400-42000 | 2 ವರ್ಷಗಳು | 01 |
| | | | ಒಟ್ಟು ಹುದ್ದೆಗಳು | | | 20 |

**ಆಯ್ಕೆ ವಿಧಾನ** : ವಿದ್ಯಾರ್ಹತೆ, ಲಿಖಿತ ಪರೀಕ್ಷೆ, ಮೌಖಿಕ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಪರಿಗಣಿಸಿ ಅರ್ಹತೆಯ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಅರ್ಜಿ ಶುಲ್ಕ :** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-1 ಹಾಗು ಅಂಗವಿಕಲರಿಗೆ ರೂ. 500/- ಮತ್ತು ಸಾಮಾನ್ಯ ವರ್ಗದವರಗೆ ರೂ.1000/- ಅರ್ಜಿ ಶುಲ್ಕವನ್ನು ಕೆ.ಸಿ.ಓ.ಜಿ.ಎಫ್.ಲಿ., ಬೆಂಗಳೂರು ಇವರ ಹೆಸರಿಗೆ ಬೆಂಗಳೂರಿನಲ್ಲಿ ಪಾವತಿಯಾಗುವಂತೆ ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕಿನ ಡಿಡಿಯ ಮೂಲಕ ಸಲ್ಲಿಸುವುದು.

***ಸೂಚನೆ:*** *ಎಲ್ಲಾ ಹುದ್ದೆಗಳಿಗೆ ಕಂಪ್ಯೂಟರ್ ಜ್ಞಾನವನ್ನು ಕಡ್ಡಾಯವಾಗಿ ಹೊಂದಿರತಕ್ಕದ್ದು. ಎಲ್ಲಾ ಹುದ್ದೆಗಳಿಗೆ ಮೂಲ ವೇತನದ ಜೊತೆಗೆ ಅನ್ವಯಿಸುವ ಭತ್ಯೆಗಳು ಸೇರುತ್ತವೆ.*

***ವಯೋಮಿತಿ:*** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-1ರ ಅಭ್ಯರ್ಥಿಗಳಿಗೆ-40 ವರ್ಷ, ಹಿಂದುಳಿದ ಪಂಗಡಗಳಿಗೆ-38 ವರ್ಷ ಹಾಗು ಸಾಮಾನ್ಯ ವರ್ಗದವರಿಗೆ-35ವರ್ಷ

**ಸಾಮಾನ್ಯ ನಿಬಂಧನೆಗಳು:** (1)ಕನ್ನಡ ಭಾಷಾ ಜ್ಞಾನ ಹೊಂದಿದವರಿಗೆ ಆಧ್ಯತೆ ನೀಡಲಾಗುವುದು. ವಿದ್ಯಾರ್ಹತೆ, ಅನುಭವ, ವಯಸ್ಸು ಹಾಗೂ ಮೀಸಲಾತಿಗೆ ಸಂಬಂಧಿಸಿದಂತೆ ಪ್ರತಿಗಳನ್ನು ಲಗತ್ತಿಸತಕ್ಕದು. (2) ಆಯ್ಕೆಯಾದ ಅಭ್ಯರ್ಥಿಯನ್ನು ಕರ್ನಾಟಕ ರಾಜ್ಯ ಅಥವಾ ರಾಜ್ಯದ ಹೊರಗು ನೇಮಕಾತಿ ಮತ್ತು ವರ್ಗಾವಣೆ ಮಾಡಲು ಅವಕಾಶವಿರುತ್ತದೆ. (3) ಸೇವೆಯಲ್ಲಿರತಕ್ಕ ಅಭ್ಯರ್ಥಿಗಳು, ಎನ್‌ಒಸಿಯನ್ನು ಪಡೆದು ಅಪ್‌ಲೋಡ್ ಮಾಡತಕ್ಕದ್ದು. (4). ಹೆಚ್ಚಿನ ಮಾಹಿತಿಗಳು www.kof.co.in ನಲ್ಲಿ ಲಭ್ಯವಿದ್ದು, ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್‌ಗೆ ಭೇಟಿ ನೀಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ.(5) ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ : 25/03/2023 ಸಂಜೆ 5.30** ಗಂಟೆಯ ವರೆಗೆ ಮಾತ್ರ ಅವಕಾಶವಿರುತ್ತದೆ. (6) ಅನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಪ್ರತಿ/ಅರ್ಜಿ ಶುಲ್ಕದ ಡಿಡಿ ಹಾಗು ಅಪ್‌ಲೋಡ್ ಮಾಡಿದ ಎಲ್ಲಾ ದಾಖಲಾತಿಗಳನ್ನು ಒಳಗೊಂಡ ಲಕೋಟೆಯನ್ನು **ವ್ಯವಸ್ಥಾಪಕ ನಿರ್ದೇಶಕರು, ಕೆ.ಸಿ.ಓ.ಜಿ.ಎಫ್.ಲಿ. ನಂ.11, 4ನೇ ಮಹಡಿ, ಬ್ಲ್ಯೂ ಕ್ರಾಸ್ ಛೇಂಬರ್ಸ್, ಇನ್‌ಫೆಂಟ್ರಿ ಅಡ್ಡರಸ್ತೆ, ಬೆಂಗಳೂರು – 01** ಈ ವಿಳಾಸಕ್ಕೆ ದಿನಾಂಕ **31/03/2023ರ ಸಂಜೆ 5.30ರೊಳಗೆ** ತಲುಪಿಸತಕ್ಕದ್ದು. (7) ಲಕೋಟೆಯ ಮೇಲೆ ಅರ್ಜಿ ಸಲ್ಲಿಸಿದ ಹುದ್ದೆಯ ಹೆಸರನ್ನು ನಮೂದಿಸತಕ್ಕದ್ದು. (8) ಅಪೂರ್ಣ/ಶುಲ್ಕವಿಲ್ಲದ/ದಾಖಲಾತಿಗಳನ್ನು ಲಗತ್ತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ವ್ಯವಸ್ಥಾಪಕ ನಿರ್ದೇಶಕರು

# ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತ

ನಂ.11, ಬ್ಲ್ಯೂಕ್ರಾಸ್ ಚೇಂಬರ್ಸ್, 4ನೇ ಮಹಡಿ, ಇನ್‌ಫೆಂಟ್ರಿ ಅಡ್ಡ ರಸ್ತೆ, ಬೆಂಗಳೂರು–1

ಕ್ರ.ಸಂ:ಕೆಓಎಫ್:ಮಾಸಅ:ನೇಪ್ರ/ 1471 /2022–23 ದಿನಾಂಕ: 10.03.2023

## ನೇಮಕಾತಿ ಪ್ರಕಟಣೆ

ಮಹಾಮಂಡಳದ ಕೇಂದ್ರ ಕಛೇರಿ ಹಾಗು ಇದರ ಘಟಕಗಳಲ್ಲಿ ಖಾಲಿ ಇರುವ ವಿವಿಧ ವೃಂಧದ 20 ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಖುದ್ದಾಗಿ/ಅಂಚೆ/ಕೊರಿಯರ್ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಹುದ್ದೆಗಳ ವಿವಿರಗಳು ಈ ಕೆಳಕಂಡಂತಿರುತ್ತವೆ.

| ವರ್ಗ | ಕ್ರ. ಸಂ | ಹುದ್ದೆಯ ಹೆಸರು | ವೇತನ ಶ್ರೇಣಿ | ಕೆಲಸದ ಅನುಭವ | ಹುದ್ದೆಗಳ ಸಂಖ್ಯೆ |
|---|---|---|---|---|---|
| I | 1 | ಸಹಾಯಕ ಪ್ರಧಾನ ವ್ಯವಸ್ಥಾಪಕರು<br>Asst.General Manager | 74400–109600 | 5 ವರ್ಷಗಳು | 1 |
| II | 2 | ಸಹಾಯಕ ವ್ಯವಸ್ಥಾಪಕರು (ಪ್ರಕ್ಯೂರ್‌ಮೆಂಟ್ & ಇನ್‌ಪುಟ್)<br>Asst. Manager (Procurement & Inputs) | 43100–83900 | 5 ವರ್ಷಗಳು | 2 |
| | 3 | ಸಹಾಯಕ ವ್ಯವಸ್ಥಾಪಕರು (ಗುಣಭರವಸೆ)<br>Asst.Manager (Quality Assurance ) | 43100–83900 | 5 ವರ್ಷಗಳು | 1 |
| | 4 | ಸಹಾಯಕ ವ್ಯವಸ್ಥಾಪಕರು (ಮಾರುಕಟ್ಟೆ)<br>Asst. Manager (Marketing) | 43100–83900 | 5 ವರ್ಷಗಳು | 1 |
| III | 5 | ಮಾರುಕಟ್ಟೆ ಅಧಿಕಾರಿಗಳು<br>Marketing Officers | 33450–62600 | 3 ವರ್ಷಗಳು | 09 |
| IV | 6 | ಕಾರ್ಯನಿರ್ವಾಹಕರು (ತಾಂತ್ರಿಕ)<br>(Executive (Technical) | 27650–52650 | 3 ವರ್ಷಗಳು | 2 |
| V | 7 | ಸಹಾಯಕ ಕಾರ್ಯನಿರ್ವಾಹಕರು<br>Asst. Executive | 21400–42000 | 2 ವರ್ಷಗಳು | 3 |
| | 8 | ಸಹಾಯಕ ಕಾರ್ಯನಿರ್ವಾಹಕರು (ಗುಣಭರವಸೆ)<br>Asst.Executive(Quality Assurance ) | 21400–42000 | 2 ವರ್ಷಗಳು | 1 |
| | | | | ಒಟ್ಟು | 20 |

ನೇಮಕಾತಿಗಾಗಿ ಆನ್‌ಲೈನ್ ಅರ್ಜಿಗಳನ್ನು ದಿನಾಂಕ 11.03.2023 ರಿಂದ 25.03.2023ರ ವರೆಗೆ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗಳು ಮಹಾಮಂಡಳದ Website:www.kof.co.in ನಲ್ಲಿ ಲಭ್ಯವಿದ್ದು, ಆಸಕ್ತ ಅಭ್ಯರ್ಥಿಗಳು ಮಹಾಮಂಡಳದ ವೆಬ್‌ಸೈಟ್‌ಗೆ ಭೇಟಿ ನೀಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಬಹುದಾಗಿರುತ್ತದೆ.

ಸಹಿ/–
ವ್ಯವಸ್ಥಾಪಕ ನಿರ್ದೇಶಕರು

Karnataka Co-operative Oilseeds Growers' Federation Ltd.
KOF
Bangalore-560 001

# ಸೂಚನೆಗಳು :

1. ಮಹಾಮಂಡಳದಲ್ಲಿ ಖಾಲಿ ಇರುವ ಈ ಮೇಲಿನ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು.
2. ಅರ್ಜಿಯೊಂದಿಗೆ ಈ ಕೆಳಗೆ ಕಾಣಿಸಿದ ಪ್ರಮಾಣ ಪತ್ರಗಳ ಜೆರಾಕ್ಸ್ ಪ್ರತಿಗಳಿಗೆ ಸ್ವಯಂ ದೃಢೀಕರಿಸಿ (Self Attested) ಪ್ರತಿಗಳನ್ನು ಕಡ್ಡಾಯವಾಗಿ ಅಪ್ಲೋಡ್ ಮಾಡಬೇಕು.

    1. ವಿದ್ಯಾರ್ಹತೆಗೆ ಸಂಬಂಧಪಟ್ಟ ಎಲ್ಲಾ ಸೆಮಿಸ್ಟರ್ / ವರ್ಷಗಳ ಅಂಕ ಪಟ್ಟಿಗಳು.
    2. ಜನ್ಮ ದಿನಾಂಕಕ್ಕೆ ಸಂಬಂಧಿಸಿದಂತೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಥವಾ ಶಾಲೆಯ ವರ್ಗಾವಣೆ ಪತ್ರ ಅಥವಾ ಕ್ಯೂಮುಲೇಟಿವ್ ರೇಕಾರ್ಡ್ ಪ್ರಮಾಣ ಪತ್ರ.
    3. ಕಂಪ್ಯೂಟರ್ ಆಪರೇಷನ್ಸ್ ಮತ್ತು ಅಪ್ಲೀಕೇಶನ್ಸ್ ನಿರ್ವಹಣೆಯಲ್ಲಿ ಸಂಬಂಧಪಟ್ಟ ಹುದ್ದೆಗಳಿಗೆ ನಿಗದಿಪಡಿಸಿರುವಂತೆ ಜ್ಞಾನ ಹೊಂದಿರುವ ಪ್ರಮಾಣ ಪತ್ರಗಳು.
    4. ಸೇವಾನುಭವ ಹೊಂದಿದ ಬಗ್ಗೆ ಪ್ರಮಾಣ ಪತ್ರ.
    5. ಮೀಸಲಾತಿ ಜಾತಿ ಪ್ರಮಾಣ ಪತ್ರ.
    6. ಅಂಗವಿಕಲ ಧೃಡಿಕರಣ ಪತ್ರ.
    7. ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬೇಕಾದಲ್ಲಿ ಸಂಬಂಧಿಸಿದ ಸಂಸ್ಥೆಯ ಮೂಲಕ ಇದರಲ್ಲಿ ನೀಡಿದ ನಮೂನೆಯಲ್ಲಿ ನಿರಾಪೇಕ್ಷಣಾ (No Objection Certificate).
    8. ಅರ್ಜಿಯೊಂದಿಗೆ ನಿಗದಿತ ಅರ್ಜಿ ಶುಲ್ಕದ ಡಿಡಿ/ಪೇ ಆರ್ಡರ್‌ನ್ನು ಲಗತ್ತಿಸುವುದು.
    9. ಲಕೋಟೆಯ ಮೇಲೆ ಹುದ್ದೆಯ ಹೆಸರನ್ನು ನಮೂದಿಸುವುದು.
    10. ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಮಾತ್ರ ಸಲ್ಲಿಸುವುದು. ಆಫ್‌ಲೈನ್‌ನಲ್ಲಿ ಅವಕಾಶವಿರುವುದಿಲ್ಲ.
    11. ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ **11/03/2023 ರಿಂದ** ಕೊನೆಯ **ದಿನಾಂಕ : 25/03/2023 ಸಂಜೆ 5.30** ಗಂಟೆಯ ವರೆಗೆ.
    12. ಆನ್‌ಲೈನ್‌ಲ್ಲಿ ಸಲ್ಲಿಸಿದ ಅರ್ಜಿಯ ಪ್ರತಿ, ಡಿಡಿ ಹಾಗು ಅಪ್ಲೋಡ್ ಮಾಡಿದ ಎಲ್ಲಾ ದಾಖಲೆಗಳನ್ನೊಳಗೊಂಡ ಸೀಲ್ಡ್ ಮಾಡಿದ ಲಕೋಟೆಯನ್ನು **ದಿನಾಂಕ: 31/03/2023 ಸಂಜೆ 5.30 ರ ಒಳಗಾಗಿ** ಈ ಕೆಳಗೆ ಕಾಣಿಸಿದವರಿಗೆ ತಲುಪುವಂತೆ ಕಳುಹಿಸತಕ್ಕದ್ದು

**ವ್ಯವಸ್ಥಾಪಕ ನಿರ್ದೇಶಕರು**
**ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ**
**ಮಹಾಮಂಡಳ ನಿಯಮಿತ, ಬೆಂಗಳೂರು (ಕೆಓಎಫ್)**
**ನಂ. 11, 4ನೇ ಮಹಡಿ, ಬ್ಲೂ ಕ್ರಾಸ್ ಛೇಂಬರ್ಸ್, ಇನ್‌ಫೆಂಟರಿ ಅಡ್ಡ ರಸ್ತೆ, ಬೆಂಗಳೂರು-01**

# I. ಸಾಮಾನ್ಯ ನಿಬಂಧನೆಗಳು

Karnataka Co-operative Oilseeds Growers' Federation Ltd., Bangalore-560 001

1. ಅಭ್ಯರ್ಥಿಗಳು ಭಾರತೀಯ ನಾಗರೀಕನಾಗಿರತಕ್ಕದ್ದು.
2. ಕನ್ನಡ ಬಾಷೆ ಓದುವುದು, ಬರೆಯುವುದು ಮತ್ತು ಮಾತನಾಡುವುದು ಕಡ್ಡಾಯವಾಗಿರುತ್ತದೆ.
3. ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು, ಪ್ರತ್ಯೇಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಚಿಸಿದಲ್ಲಿ ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಹಾಗೂ ಅರ್ಜಿ ಶುಲ್ಕವನ್ನು ಪಾವತಿಸತಕ್ಕದ್ದು.
4. ಮಹಾಮಂಡಳದ ಈ ನೇಮಕಾತಿ ಪ್ರಕಟಣೆಯಲ್ಲಿನ ಸೂಚನೆಗಳನ್ನು ಪೂರ್ಣವಾಗಿ ತಿಳಿಯದೇ ಅಭ್ಯರ್ಥಿಗಳು ತಪ್ಪೆಸಗಿದಲ್ಲಿ ಮಂಡಳವು ಜವಾಬ್ದಾರರಾಗುವುದಿಲ್ಲ.
5. ಅರ್ಜಿಯಲ್ಲಿ ನಮೂದಿಸಿದ ಅಂಕಗಳು / ಇತರೇ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸಗಳು ಕಂಡುಬಂದಲ್ಲಿ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
6. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು, ಅಪೂರ್ಣವಾದ, ತಪ್ಪು ಮಾಹಿತಿ ಮತ್ತು ಅಸ್ಪಷ್ಟ ಮಾಹಿತಿ ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಅಂತಹ ಅರ್ಜಿಗಳನ್ನು ಯಾವುದೇ ಸೂಚನೆ ನೀಡದೆ ತಿರಸ್ಕರಿಸಲಾಗುವುದು ಮತ್ತು ಅರ್ಜಿ ಶುಲ್ಕವನ್ನು ವಾಪಸ್ಸು ಮಾಡಲಾಗುವುದಿಲ್ಲ.
7. ನೇಮಕಾತಿ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೆ ಯಾವುದೇ ಹಂತದಲ್ಲಿ ಹಿಂದಕ್ಕೆ ಪಡೆಯುವ/ರದ್ದು ಪಡಿಸುವ ಅಧಿಕಾರವನ್ನು ಮಂಡಳವು ಹೊಂದಿರುತ್ತದೆ. ಇಂತಹ ಸಂದರ್ಭದಲ್ಲಿ ಅರ್ಜಿ ಶುಲ್ಕವನ್ನು ವಾಪಸ್ಸು ಮಾಡಲಾಗುವುದಿಲ್ಲ.
8. ಅಭ್ಯರ್ಥಿಗಳು ಆಯ್ಕೆಯಾದ ನಂತರ ಸಲ್ಲಿಸಿರುವ . ದಾಖಲಾತಿಗಳ ನೈಜತೆಯನ್ನು ಸಂಬಂಧಪಟ್ಟ ಸಂಸ್ಥೆ/ಪ್ರಾಧಿಕಾರ/ವಿಶ್ವವಿದ್ಯಾನಿಲಯಗಳಿಂದ ಧೃಡಿಕರಿಸಿಕೊಂಡು ನೇಮಕಾತಿ ಆದೇಶ ಹೊರಡಿಸುವ ಹಕ್ಕನ್ನು ಮಹಾಮಂಡಳ ಕಾಯ್ದಿರಿಸಿಕೊಂಡಿದೆ.
9. ಆಯ್ಕೆಗೊಂಡ ಅಭ್ಯರ್ಥಿಗಳಿಗೆ ಮಹಾಮಂಡಳವು ನಿಗದಿಪಡಿಸಿದಂತೆ ಪರೀಕ್ಷಾವಧಿ ಇರುತ್ತದೆ. ಅವಶ್ಯವಿದ್ದಲ್ಲಿ ಪರೀಕ್ಷಾವಧಿಯನ್ನು ವಿಸ್ತರಿಸಲಾಗುವುದು. ಪರೀಕ್ಷಾವಧಿಯಲ್ಲಿ ಅಭ್ಯರ್ಥಿಗಳ ಸೇವೆ ತೃಪ್ತಿಕರವಾಗಿದ್ದಲ್ಲಿ ಮಾತ್ರ ಅಂತಹವರ ಸೇವೆಯನ್ನು ಖಾಯಂಗೊಳಿಸಲಾಗುವುದು.
10. ಆಯ್ಕೆಯಾದ ಅಭ್ಯರ್ಥಿಗಳು ಮಹಾಮಂಡಳವು ನಿಗದಿಪಡಿಸಿದಂತೆ ಒಪ್ಪಂದವನ್ನು ಮತ್ತು ಭದ್ರತೆಯನ್ನು ನೀಡಬೇಕಾಗುತ್ತದೆ.
11. ಆಯ್ಕೆಯಾದ ಆಭ್ಯರ್ಥಿಗಳು ಮಂಡಳದ ಕಾರ್ಯವ್ಯಾಪ್ತಿ ಮತ್ತು ಕರ್ನಾಟಕ ರಾಜ್ಯ ಅಥವಾ ಹೊರರಾಜ್ಯದ ಹೊರಗು ವರ್ಗಾವಣೆ ಮಾಡಲು ಅವಕಾಶ ಇರುತ್ತದೆ.
12. ಮಹಾಮಂಡಳಕ್ಕೆ ನೇಮಕಗೊಂಡ ಅಭ್ಯರ್ಥಿಗಳು ಮಹಾಮಂಡಳದ ಸೇವಾ ನಿಯಮಗಳ ರೀತ್ಯಾ ಕಾರ್ಯನಿರ್ವಹಿಸಬೇಕಾಗುವುದು.
13. ಮಹಾಮಂಡಳದ ಅಭ್ಯರ್ಥಿತ್ವದ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ.
14. ನೇಮಕಾತಿ ಪ್ರಕ್ರಿಯೆ ಮುಗಿಯುವ ವರೆಗೂ ಅವಶ್ಯವಿದ್ದಲ್ಲಿ ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವ ವಿಳಾಸ, ಮೊಬೈಲ್ ಮತ್ತು ಇ–ಮೇಲ್ ಐಡಿಗಳ ಮೂಲಕ ಸಂಪರ್ಕಿಸಲಾಗುವುದು.

Karnataka Co-operative Oilseeds Growers' Federation Ltd. Bangalore-560 001

## II. ವಯೋಮಿತಿ

ನೇಮಕಾತಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗದಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ಮೀಸಲಾತಿ ವರ್ಗೀಕರಣ | ಕನಿಷ್ಟ ವಯೋಮಿತಿ | ಗರಿಷ್ಟ ವಯೋಮಿತಿ |
|---|---|---|
| ಸಾಮಾನ್ಯ ವರ್ಗ | 18 ವರ್ಷ ತುಂಬಿರಬೇಕು | 35 ವರ್ಷ ಮೀರಿರಬಾರದು |
| ಪ್ರವರ್ಗ2ಎ, ಪ್ರವರ್ಗ2ಬಿ, ಪ್ರವರ್ಗ3ಎ, ಪ್ರವರ್ಗ3ಬಿ | 18 ವರ್ಷ ತುಂಬಿರಬೇಕು | 38 ವರ್ಷ ಮೀರಿರಬಾರದು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ–1 | 18 ವರ್ಷ ತುಂಬಿರಬೇಕು | 40 ವರ್ಷ ಮೀರಿರಬಾರದು |

1. ವಯೋಮಿತಿ ರಿಯಾಯತಿ ಕೋರಬಯಸುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ–1/ಪ್ರವರ್ಗ2ಎ, ಪ್ರವರ್ಗ2ಬಿ, ಪ್ರವರ್ಗ3ಎ, ಪ್ರವರ್ಗ3ಬಿ ಅಭ್ಯರ್ಥಿಗಳು ಇದಕ್ಕೆ ಸಂಬಂಧಿಸಿದಂತೆ ಸರ್ಕಾರವು ನಿಗದಿಪಡಿಸಿರುವ ನಮೂನೆಗಳಲ್ಲಿ ಚಾಲ್ತಿಯಲ್ಲಿರುವ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಅಪ್ಲೋಡ್ ಮಾಡಬೇಕು.

## III. ಆಯ್ಕೆ ವಿಧಾನ:

ಸ್ವೀಕರಿಸಲಾದ ಅರ್ಜಿಗಳನ್ನು ನಿಗದಿ ಪಡಿಸಿದ ವಿದ್ಯಾರ್ಹತೆ ಹಾಗೂ ಅಗತ್ಯ ದಾಖಲೆಗಳ ಆಧಾರದ ಮೇಲೆ ಪರಿಶೀಲಿಸಿ ಅರ್ಹ ಅಭ್ಯರ್ಥಿಗಳಿಗೆ ಸರ್ಕಾರವು ಸೂಚಿಸಿರುವ ಬಾಹ್ಯ ಮೂಲ ಸಂಸ್ಥೆಗಳಿಂದ ಕರ್ನಾಟಕ ಸಹಕಾರ ಸಂಘಗಳ ನಿಯಮ 1960 18(ಸಿ) ರಂತೆ ಲಖಿತ ಪರೀಕ್ಷೆಯನ್ನು ನಡೆಸಲಾಗುವುದು. ಕನ್ನಡ ಭಾಷೆಗೆ 50 ಅಂಕಗಳು, ಸಾಮಾನ್ಯ ಇಂಗ್ಲೀಷ್‌ಗಾಗಿ 25 ಅಂಕಗಳು, ಸಾಮಾನ್ಯ ಜ್ಞಾನಕ್ಕಾಗಿ 25 ಅಂಕಗಳು, ಸಹಕಾರ ವಿಷಯಗಳಿಗಾಗಿ 50 ಅಂಕಗಳು, ಭಾರತದ ಸಂವಿಧಾನ ವಿಷಯಕ್ಕಾಗಿ 25 ಅಂಕಗಳು ಹಾಗೂ ಸಂಸ್ಥೆಯ ಕಾರ್ಯಕ್ಷೇತ್ರ, ಉದ್ದೇಶ, ಕಾರ್ಯಚಟುವಟಿಕೆಗಳ ವಿಷಯಗಳಿಗಾಗಿ 25 ಅಂಕಗಳು ಒಳಗೊಂಡಿರುತ್ತವೆ.ಅರ್ಹ ಅಭ್ಯರ್ಥಿಗಳಿಗೆ ಮೇಲಿನಂತೆ ಒಟ್ಟು 200 ಅಂಕಗಳಿಗೆ ಲಿಖಿತ ಪರೀಕ್ಷೆಯನ್ನು ನಡೆಸಲಾಗುವುದು.

ಲಿಖಿತ ಪರೀಕ್ಷೆಗೆ ಅರ್ಹವಿರುವ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷಾ ಪ್ರವೇಶ ಪತ್ರವನ್ನುಅರ್ಜಿಯಲ್ಲಿ ನಮೂದಿಸಿದ ವಿಳಾಸಕ್ಕೆ ಅಂಚೆ ಮೂಲಕ / ಇ-ಮೇಲ್ ಮೂಲಕ ಕಳುಹಿಸಲಾಗುವುದು. ಮಹಾಮಂಡಳ ವೆಬ್‌ಸೈಟ್‌ನಲ್ಲಿ ಲಿಖಿತ ಪರೀಕ್ಷೆಯ ಸ್ಥಳ, ದಿನಾಂಕ ಮತ್ತು ಸಮಯವನ್ನು ಪ್ರಕಟಿಸಲಾಗುವುದು. ಸದರಿ ಮಾಹಿತಿಯನ್ನು ಮಹಾಮಂಡಳದದ ವೆಬ್‌ಸೈಟ್ ಮೂಲಕ ತಿಳಿದುಕೊಳ್ಳುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

ಲಿಖಿತ ಪರೀಕ್ಷೆಯಲ್ಲಿ (Written Examination)ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಅಭ್ಯರ್ಥಿಗಳನ್ನು 1:5ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕಾಗಿ ಕರೆಯಲಾಗುವುದು. ಮೌಖಿಕ ಸಂದರ್ಶನಕ್ಕೆ ಗರಿಷ್ಟ 15 ಅಂಕಗಳನ್ನು ನಿಗದಿಪಡಿಸಲಾಗಿದೆ. ಅಭ್ಯರ್ಥಿಯು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡಾ 85ಕ್ಕೆ ಇಳಿಸಿ ಪ್ರಾಪ್ತವಾಗುವ ಅಂಕಗಳ ಜೊತೆಗೆ ಮತ್ತು ಮೌಖಿಕ ಪರೀಕ್ಷೆಯಲ್ಲಿ ಗಳಿಸುವ ಅಂಕಗಳನ್ನು ಒಟ್ಟುಗೂಡಿಸಿ ಅಂತಿಮ ಅರ್ಹತಾ ಪಟ್ಟಿಯನ್ನು ತಯಾರಿಸಿ ಅರ್ಹತೆಯ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಅಭ್ಯರ್ಥಿಯ ಅರ್ಹತೆಯ ಬಗ್ಗೆ ನೇಮಕಾತಿ ಸಮಿತಿಯ ನಿರ್ಣಯವೇ ಅಂತಿಮವಾಗಿರುತ್ತದೆ.

ಮಹಾಮಂಡಳವು ತಿಳಿಸಿದ ಸ್ಥಳದಲ್ಲಿ ಲಿಖಿತ ಪರೀಕ್ಷೆ ಹಾಗೂ ಮೌಖಿಕ ಸಂದರ್ಶನಕ್ಕೆ ಅಭ್ಯರ್ಥಿಗಳು ಅವರ ಸ್ವಂತ ಖರ್ಚಿನಲ್ಲಿ ಹಾಜರಾಗುವುದು.

## IV. ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು

ಜಾತಿ/ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದುಕೊಂಡಿರತಕ್ಕದ್ದು ಮತ್ತು ಚಾಲ್ತಿಯಲ್ಲಿರತಕ್ಕದ್ದು.

1. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು : ನಮೂನೆ 'ಡಿ'
2. ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳು : ನಮೂನೆ 'ಇ'
3. ಪ್ರವರ್ಗ–2ಎ, 2ಬಿ, 3ಎ, ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು : ನಮೂನೆ 'ಎಫ್'

## V. ಶೈಕ್ಷಣಿಕ ವಿದ್ಯಾರ್ಹತೆ

ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಂಬಂಧಿಸಿದ ಹುದ್ದೆಗಳಿಗೆ ಸೂಚಿಸಿರುವ ಕನಿಷ್ಟ ವಿದ್ಯಾರ್ಹತೆಯನ್ನು ಹಾಗು ಅನುಭವವನ್ನು ಆಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು.ಅಭ್ಯರ್ಥಿಗಳು ಅರ್ಜಿಯಲ್ಲಿ ಎಲ್ಲಾ ಸೆಮಿಸ್ಟರ್ / ವರ್ಷಗಳಲ್ಲಿ ನಿಗದಿಪಡಿಸಿರುವ ಗರಿಷ್ಟ ಮತ್ತು ಪಡೆದಿರುವ ಅಂಕಗಳನ್ನು ವಿವರ ಹಾಗೂ ಅವುಗಳನ್ನು ಕ್ರೋಢಿಕರಿಸಿ ಸರಾಸರಿ ಅಂಕಗಳನ್ನು ಸ್ಪಷ್ಟವಾಗಿ ಅರ್ಜಿಯಲ್ಲಿ ತಿಳಿಸಿರುವಂತೆ ನಮೂದಿಸುವುದು.

ಗ್ರೇಡ್ ಅಂಕಗಳನ್ನು ಪಡೆದ ಅಭ್ಯರ್ಥಿಗಳು ಅವರ ಗ್ರೇಡ್ ಅಂಕಗಳನ್ನು ಶೇಕಡಾವಾರು ಅಂಕಗಳಿಗೆ ಪರಿವರ್ತಿಸಿ ಶೇಕಡಾವಾರು ಅಂಕಗಳನ್ನು ತಪ್ಪದೇ ನಮೂದಿಸಬೇಕು.

ಪದವಿ ಎಂದರೆ ಅಭ್ಯರ್ಥಿಯು 10+2 ವಿದ್ಯಾಭ್ಯಾಸದ ನಂತರ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯದಿಂದ ನಿಯತವಾಗಿ ಕನಿಷ್ಟ ಮೂರು/ನಾಲ್ಕು/ ವರ್ಷ ಅವಧಿಯ ಸಾಂಪ್ರದಾಯಕ ಬಿ.ಕಾಂ/ಬಿಬಿಎಂ/ಬಿಬಿಎ/ಬಿ.ಎಸ್ಸಿ/ ಪದವಿ.

1. <u>ಹುದ್ದೆ ಸಂಖ್ಯೆ 01: ಸಹಾಯಕ ಪ್ರಧಾನ ವ್ಯವಸ್ಥಾಪಕರು / *Asst.General Manager*</u>

ಅಂಗೀಕೃತ ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯದಿಂದ ಎಂ.ಎಸ್ಸಿ., ಕೃಷಿ (ಕೃಷಿ ಮಾರಾಟ/ಬೀಜ ತಂತ್ರಜ್ಞಾನ/ಆಗ್ರೋನಮಿ/ ಅಗ್ರಿಕಲ್ಚರ್ ಎಕ್ಸ್‌ಟನ್ಷನ್/ ಅಗ್ರಿಕಲ್ಚರಲ್ ಎಕನಾಮಿಕ್ಸ್ /ಸಾಯಿಲ್ ಸೈನ್ಸ್ ವಿಷಯದಲ್ಲಿ ಸ್ನಾತಕೊತ್ತರ ಪದವಿ)

**ಅಥವಾ**

ಇಂಡಿಯನ್ ಇನ್‌ಸ್ಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್/ ಇನ್‌ಸ್ಟ್ಯೂಟ್ ಆಫ್ ರೂರಲ್ ಮ್ಯಾನೇಜ್ ಮೆಂಟ್,ಆನಂದ್,ಗುಜರಾತ್ ಎಂಬಿಎ ಸ್ನಾತಕೊತ್ತರ ಪದವಿ)

**ಅಥವಾ**

ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಅಡ್ಮಿನಿಸ್ಟ್ರೇಷನ್/ ಫೈನಾನ್ಸ್/ಮಾರ್ಕೆಟಿಂಗ್/ಬ್ಯುಸಿನೆಸ್ ಮ್ಯಾನೇಜ್‌ಮೆಂಟ್ /ಕೃಷಿ ವಿಷಯದಲ್ಲಿ ಎಂ.ಬಿ.ಎ ಸ್ನಾತಕೋತರ ಪದವಿ.

ಕಂಪ್ಯೂಟರ್ ಕಾರ್ಯಾಚರಣೆಯ ಪೂರ್ಣ ಪರಿಜ್ಞಾನ ಹೊಂದಿರತಕ್ಕದ್ದು.

ಪ್ರತಿಷ್ಠಿತ ಸಂಸ್ಥೆಗಳಲ್ಲಿ ಹಿರಿಯ ಹುದ್ದೆಗಳಲ್ಲಿ ಅಂದರೆ – ಅಸಿಸ್ಟೆಂಟ್ ಜನರಲ್ ಮ್ಯಾನೇಜರ್/ ಡೆಪ್ಯೂಟಿ ಜನರಲ್ ಮ್ಯಾನೇಜರ್/ಜನರಲ್ ಮ್ಯಾನೇಜರ್ ಅಥವಾ ಈ ಹುದ್ದೆಗಳ ಸಮಾನಂತರ ಹುದ್ದೆಗಳಲ್ಲಿ ಕನಿಷ್ಟ 5 ವರ್ಷಗಳು ಅನುಭವ

2. ಹುದ್ದೆ ಸಂಖ್ಯೆ 02: ಸಹಾಯಕ ವ್ಯವಸ್ಥಾಪಕರು (ಪ್ರಕ್ಯೂರ್‌ಮೆಂಟ್ & ಇನ್‌ಪುಟ್)/ *Asst. Manager (P&I)*

Karnataka Co-operative Oilseeds Growers' Federation Ltd. KOF Bangalore-560 001

ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಸ್ನಾತಕೋತರ ಪದವಿ ಎಂದರೆ ಅಭ್ಯರ್ಥಿಯು ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿಧ್ಯಾನಿಲಯದಿಂದ ನಿಯತವಾಗಿ ಕನಿಷ್ಟ ನಾಲ್ಕು ವರ್ಷ ಅವಧಿಯ ಸಾಂಪ್ರದಾಯಕ ಬಿ.ಎಸ್ಸಿ (ಕೃಷಿ) ಪದವಿಯೊಂದಿಗೆ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿಧ್ಯಾನಿಲಯದಿಂದ ನಿಯತವಾಗಿ ಆಗ್ರೋನಮಿ /ಬೀಜ ತಂತ್ರಜ್ಞಾನ/ಪ್ಲಾಂಟ್ ಬ್ರೀಡಿಂಗ್ & ಜೆನೆಟಿಕ್ಸ್‌ನಲ್ಲಿ ಪಡೆದ ಎಂ.ಎಸ್ಸಿ ಸ್ನಾತಕೋತ್ತರ ಪದವಿ. 5 ವರ್ಷಗಳ ಕೆಲಸದ ಅನುಭವ, ಕಂಪ್ಯೂಟರ್ ಜ್ಞಾನ ಹೊಂದಿರತಕ್ಕದ್ದು.

3. ಹುದ್ದೆ ಸಂಖ್ಯೆ 01: ಸಹಾಯಕ ವ್ಯವಸ್ಥಾಪಕರು (ಗುಣಭರವಸೆ)/*Asst. Manager (Quality Assurance )*

ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಸ್ನಾತಕೋತರ ಪದವಿ ಎಂದರೆ ಅಭ್ಯರ್ಥಿಯು ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿಧ್ಯಾನಿಲಯದಿಂದ ನಿಯತವಾಗಿ ಕನಿಷ್ಟ ಮೂರು ವರ್ಷ ಅವಧಿಯ ಸಾಂಪ್ರದಾಯಕ ಬಿ.ಎಸ್ಸಿ (ಕೆಮಿಷ್ಟ್ರಿ/ಬಯೋ ಕೆಮಿಷ್ಟ್ರಿ/ ಬಯೋ ಟೆಕ್/ಫುಡ್ ಸೈನ್ಸ್) ಪದವಿ. ಪದವಿಯೊಂದಿಗೆ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿಧ್ಯಾನಿಲಯದಿಂದ ನಿಯತವಾಗಿ(ಕೆಮಿಷ್ಟ್ರಿ/ಬಯೋಕೆಮಿಷ್ಟ್ರಿ/ಬಯೋಟೆಕ್/ಫುಡ್ ಸೈನ್ಸ್‌ನಲ್ಲಿ ಪಡೆದ ಎಂ.ಎಸ್ಸಿ ಸ್ನಾತಕೋತ್ತರ ಪದವಿ. 5 ವರ್ಷಗಳು ಕೆಲಸದ ಅನುಭವ. ಆಯಿಲ್ ಮಿಲ್‌ನಲ್ಲಿ ಅನುಭವ ಇದ್ದವರಿಗೆ ಆಧ್ಯತೆ ಕಂಪ್ಯೂಟರ್ ಜ್ಞಾನ ಹೊಂದಿರತಕ್ಕದ್ದು.

4. ಹುದ್ದೆ ಸಂಖ್ಯೆ 01 : ಸಹಾಯಕ ವ್ಯವಸ್ಥಾಪಕರು (ಮಾರುಕಟ್ಟೆ) /*Asst. Manager (Marketing)*

ಎಂ.ಬಿ.ಎ (ಮಾರುಕಟ್ಟೆ) ಸ್ನಾತಕೋತ್ತರ ಪದವಿ ಎಂದರೆ ಅಭ್ಯರ್ಥಿಯು ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿಧ್ಯಾನಿಲಯದಿಂದ ನಿಯತವಾಗಿ ಕನಿಷ್ಟ ಮೂರು ಅವಧಿಯ ಸಾಂಪ್ರದಾಯಕ ಬಿ.ಕಾಂ/ಬಿಬಿಎಂ/ಬಿಬಿಎ/ ಪದವಿಯೊಂದಿಗೆ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿಧ್ಯಾನಿಲಯದಿಂದ ನಿಯತವಾಗಿ /ಎಂ.ಬಿ.ಎ (ಮಾರುಕಟ್ಟೆ) ನಲ್ಲಿ ಪಡೆದ ಸ್ನಾತಕೋತ್ತರ ಪದವಿ. 5 ವರ್ಷಗಳು ಕೆಲಸದ ಅನುಭವ. *FMCG*/ಖಾದ್ಯ ತೈಲ ಮಾರುಕಟ್ಟೆಯಲ್ಲಿ ಅನುಭವ ಇದ್ದವರಿಗೆ ಆಧ್ಯತೆ. ಕಂಪ್ಯೂಟರ್ ಜ್ಞಾನ ಹೊಂದಿರತಕ್ಕದ್ದು.

5. ಹುದ್ದೆಗಳ ಸಂಖ್ಯೆ 09: ಮಾರುಕಟ್ಟೆ ಅಧಿಕಾರಿಗಳು/ **Marketing Officers**

ಎಂ.ಬಿ.ಎ (ಮಾರುಕಟ್ಟೆ) ಸ್ನಾತಕೋತ್ತರ ಪದವಿ ಎಂದರೆ ಅಭ್ಯರ್ಥಿಯು ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿಧ್ಯಾನಿಲಯದಿಂದ ನಿಯತವಾಗಿ ಕನಿಷ್ಟ ಮೂರು ಅವಧಿಯ ಸಾಂಪ್ರದಾಯಕ ಬಿ.ಕಾಂ/ಬಿಬಿಎಂ/ಬಿಬಿಎ/ ಪದವಿಯೊಂದಿಗೆ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿಧ್ಯಾನಿಲಯದಿಂದ ನಿಯತವಾಗಿ /ಎಂ.ಬಿ.ಎ (ಮಾರುಕಟ್ಟೆ) ನಲ್ಲಿ ಪಡೆದ ಸ್ನಾತಕೋತ್ತರ ಪದವಿ. 3 ವರ್ಷಗಳು ಕೆಲಸದ ಅನುಭವ. ಆಯಿಲ್ ಮಿಲ್‌ನಲ್ಲಿ ಅನುಭವ ಇದ್ದವರಿಗೆ ಆಧ್ಯತೆ. ಕಂಪ್ಯೂಟರ್ ಜ್ಞಾನ ಹೊಂದಿರತಕ್ಕದ್ದು.

6. ಹುದ್ದೆಗಳ ಸಂಖ್ಯೆ 02 : ಕಾರ್ಯನಿರ್ವಾಹಕರು (ತಾಂತ್ರಿಕ) /**Executive (Technical)**

ತಾಂತ್ರಿಕ ಶಿಕ್ಷಣ ಮಂಡಳಿಯಿಂದ ಮಾನ್ಯತೆ ಪಡೆದ ವಿದ್ಯಾಸಂಸ್ಥೆಗಳಿಂದ ಡಿಪ್ಲೋಮದಲ್ಲಿ ಎಲೆಕ್ಟ್ರಿಕಲ್/ಮೆಕಾನಿಕಲ್ ಇಂಜಿನಿಯರಿಂಗ್ ವಿದ್ಯಾರ್ಹತೆ ಹೊಂದಿರಬೇಕು. ಅಥವಾ ಬ್ಯಾಚುರಲ್ ಆಫ್ ಇಂಜಿನಿಯರಿಂಗ್‌ನಲ್ಲಿ ಎಲೆಕ್ಟ್ರಿಕಲ್/ಮೆಕಾನಿಕಲ್ ವಿದ್ಯಾರ್ಹತೆ ಹೊಂದಿರಬೇಕು. 2 ವರ್ಷಗಳು ಕೆಲಸದ ಅನುಭವ. ಆಯಿಲ್ ಮಿಲ್‌ನಲ್ಲಿ ಅನುಭವ ಇದ್ದವರಿಗೆ ಆಧ್ಯತೆ. ಕಂಪ್ಯೂಟರ್ ಜ್ಞಾನ ಹೊಂದಿರತಕ್ಕದ್ದು.

7. <u>ಹುದ್ದೆಗಳ ಸಂಖ್ಯೆ 03 : ಸಹಾಯಕ ಕಾರ್ಯನಿರ್ವಾಹಕರು /**Asst Executive**</u>

ಪದವಿ ಎಂದರೆ ಅಭ್ಯರ್ಥಿಯು 10+2 ವಿದ್ಯಾಭ್ಯಾಸದ ನಂತರ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯದಿಂದ ನಿಯತವಾಗಿ ಕನಿಷ್ಟ ಮೂರು/ನಾಲ್ಕು/ ವರ್ಷ ಅವಧಿಯ ಸಾಂಪ್ರದಾಯಕ ಬಿ.ಕಾಂ/ಬಿಬಿಎಂ/ಬಿಬಿಎ/ಬಿ.ಎಸ್ಸಿ/ ಪದವಿ. 2 ವರ್ಷಗಳು ಕೆಲಸದ ಅನುಭವ. ಕಂಪ್ಯೂಟರ್ ಜ್ಞಾನ ಹೊಂದಿರತಕ್ಕದ್ದು.

8. <u>ಹುದ್ದೆ ಸಂಖ್ಯೆ 01: ಸಹಾಯಕ ಕಾರ್ಯನಿರ್ವಾಹಕರು (ಗುಣಭರವಸೆ)/ **Asst Executive . (Quality Assurance )**</u>

ಪದವಿ ಎಂದರೆ ಅಭ್ಯರ್ಥಿಯು 10+2 ವಿದ್ಯಾಭ್ಯಾಸದ ನಂತರ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯದಿಂದ ನಿಯತವಾಗಿ ಕನಿಷ್ಟ ಮೂರು/ನಾಲ್ಕು/ ವರ್ಷ ಅವಧಿಯ ಸಾಂಪ್ರದಾಯಕ ಬಿ.ಎಸ್ಸಿ (ಕೆಮಿಷ್ಟ್ರಿ/ಬಯೋ ಕೆಮಿಷ್ಟ್ರಿ/ ಬಯೋ ಟೆಕ್/ಫುಡ್ ಸೈನ್ಸ್) ಪದವಿ. 2 ವರ್ಷಗಳು ಕೆಲಸದ ಅನುಭವ. ಕಂಪ್ಯೂಟರ್ ಜ್ಞಾನ ಹೊಂದಿರತಕ್ಕದ್ದು.

## VI. ಅರ್ಜಿ ಶುಲ್ಕ

| | | |
|---|---|---|
| 01 | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಹಾಗೂ ಅಂಗವಿಕಲ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕ | ಅರ್ಜಿ ಶುಲ್ಕ **ರೂ. 500/–** (ಬ್ಯಾಂಕ್ ಶುಲ್ಕ ಪ್ರತ್ಯೇಕ) |
| 02 | ಇತರೆ ವರ್ಗದ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕ | ಅರ್ಜಿ ಶುಲ್ಕ **ರೂ. 1,000/–** (ಬ್ಯಾಂಕ್ ಶುಲ್ಕ ಪ್ರತ್ಯೇಕ) |

- ನಿಗದಿ ಪಡಿಸಿದ ಶುಲ್ಕವನ್ನು ಅರ್ಜಿಯೊಂದಿಗೆ ಡಿಡಿ/ಪೇ ಆರ್ಡರ್‌ನ್ನು ಬೆಂಗಳೂರುದಲ್ಲಿ ಸಂದಾಯವಾಗುವಂತೆ **KCOGF Ltd., Bangalore** ಇವರ ಹೆಸರಿನಲ್ಲಿ ಪಡೆದು ಲಗತ್ತಿಸಿರಬೇಕು.
- ನಿಗದಿ ಪಡಿಸಿದ ಶುಲ್ಕದ ಡಿಡಿ/ಪೇ ಆರ್ಡರ್‌ನ್ನು ಅರ್ಜಿಯೊಂದಿಗೆ ಲಗತ್ತಿಸದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಚಿಸಿದಲ್ಲಿ ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ ಪ್ರತ್ಯೇಕವಾಗಿ ಅರ್ಜಿ ಶುಲ್ಕವನ್ನು ಪಾವತಿಸತಕ್ಕದ್ದು.
- ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಮಂಡಳದ ಇತರೇ ಯಾವುದೇ ನೇಮಕಾತಿಗಳಿಗೆ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ.
- ನಿಗದಿತ ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂತಿರುಗಿಸಲಾಗುವುದಿಲ್ಲ.
- ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ :** 25/03/2023 **ಸಂಜೆ** 5.30 ಗಂಟೆಯ ವರೆಗೆ.
- ಆನ್ ಲೈನ್‌ನಲ್ಲಿ ಸಲ್ಲಿಸಿದ ಅರ್ಜಿಯ ಪ್ರತಿ ಹಾಗು ದಾಖಲಾತಿಗಳ ಪ್ರತಿ/ ಡಿಡಿಯನ್ನು ಮಹಾಮಂಡಳಕ್ಕೆ ಸಲ್ಲಿಸಲು ಕೊನೆಯ ದಿನಾಂಕ 31/03/2023

## VII. ಪ್ರಮುಖ ನಿಬಂಧನೆಗಳು

1. ಅಭ್ಯರ್ಥಿಗಳು ಅರ್ಜಿಯಲ್ಲಿ ಒದಗಿಸಿದ ಮಾಹಿತಿಗಳು ಮತ್ತು ಲಗತ್ತಿಸಿದ ದಾಖಲಾತಿಗಳ ಆಧಾರದ ಮೇಲೆ ಅವರುಗಳು ಪರೀಕ್ಷೆಗೆ ಅರ್ಹರೆ ಎಂಬುದನ್ನು ಮಹಾಂಂಡಳವು ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಲಿಖಿತ ಪರೀಕ್ಷೆಗೆ ಪ್ರವೇಶ ಪತ್ರಗಳನ್ನು ನೀಡುತ್ತದೆ. ಆದ್ದರಿಂದ ನಿಗದಿ ಪಡಿಸಿದ ವಯೋಮಿತಿ, ವಿದ್ಯಾರ್ಹತೆ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ / ಅಪೂರ್ಣ ಮಾಹಿತಿ ಸಲ್ಲಿಸುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ತಿರಸ್ಕರಿಸುವ ಹಕ್ಕನ್ನು ಮಹಾಮಂಡಳವು ಹೊಂದಿರುತ್ತದೆ.

2. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

3. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

4. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ಮುಂದಿನ ಕೆಲಸದ ದಿನವು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗುವುದು.

## VIII. ಸೇವಾ ಸೌಲಭ್ಯಗಳನ್ನು ನೀಡುವ ಬಗ್ಗೆ.

1. ಮಹಾಮಂಡಳದ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತ ಪಿಂಚಣಿ ಟ್ರಸ್ಟ್‌ನಿಂದ ಸೌಲಭ್ಯವಿರುತ್ತದೆ.

2. ಮಹಾಮಂಡಳ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಮಂಡಳದ ಅನುಮೋದಿತ ಸೇವಾ ನಿಯಮಗಳು ಹಾಗೂ ವೃಂದ ಮತ್ತು ನೇಮಕಾತಿ ನಿಯಮಗಳು ಅನ್ವಯಿಸುತ್ತವೆ.

3. ಮಹಾಮಂಡಳದ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳು ನೇಮಕಾತಿ ಪ್ರಕಟಣೆಯಲ್ಲಿ ತಿಳಿಸಿದ ವೇತನ ಶ್ರೇಣಿಯಲ್ಲಿ ಸೇವಾ ಸೌಲಭ್ಯವನ್ನು ಪಡೆಯಲು ಅರ್ಹರಾಗಿರುತ್ತಾರೆ.

4. ಆಯ್ಕೆಯಾಗುವ ಅಭ್ಯರ್ಥಿಗಳು ನಿಯೋಜಿಸಿದ ಪಾಳಿಗಳಲ್ಲಿ ಕರ್ತವ್ಯ ನಿರ್ವಹಿಸಲು ಬದ್ಧರಾಗಿರಬೇಕು.

5. ಮಂಡಳದ ಹಿತದೃಷ್ಟಿಯಿಂದ ಮಹಾಮಂಡಳ ವ್ಯಾಪ್ತಿಯನ್ನು ಹೊರತು ಪಡಿಸಿದ ಯಾವುದೇ ಸ್ಥಳಗಳಿಗೂ ಸಹ ಕರ್ತವ್ಯಕ್ಕೆ ಅಭ್ಯರ್ಥಿಗಳನ್ನು ನಿಯೋಜಿಸಬಹುದಾದ ಹಕ್ಕನ್ನು ಮಹಾಮಂಡಳವು ಹೊಂದಿರುತ್ತದೆ.

## IX. ದುರ್ನಡತೆ:

ಒಬ್ಬ ವ್ಯಕ್ತಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸುತ್ತಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡು ಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು. ಇಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ನೇಮಕಾತಿಯ ಪ್ರಕ್ರಿಯೆಯ ಸಂದರ್ಭದಲ್ಲಿ ಅಥವಾ ನೇಮಕಾತಿಯ ನಂತರವು ಖಾಯಂ ಆಗಿ ವಜಾ ಮಾಡಲಾಗುವುದು.

## X. ನೇಮಕಾತಿಗೆ ಅನರ್ಹತೆಗಳು:

1. ಕಾನೂನುಬಾಹಿರ (Unlawful body) ನಿಕಾಯ ಸಂಸ್ಥೆಯೊಂದಿಗೆ ಅವನು/ಅವಳು ಸಂಪರ್ಕ ಹೊಂದಿದ್ದಲ್ಲಿ ಅಥವಾ ಸದಸ್ಯರಾಗಿದ್ದಲ್ಲಿ ಅಥವಾ ಅಂತಹ ಸಂಸ್ಥೆ/ನಿಕಾಯದ ಯಾವುದೇ ಚಟುವಟಿಕೆ ಅಥವಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಲ್ಲಿ
2. ಭಾರತ ಸಂವಿಧಾನಕ್ಕೆ ಚ್ಯುತಿ ತರುವ ಕಾರ್ಯದಲ್ಲಿ ಪ್ರವೃತ್ತನಾಗಿದ್ದಲ್ಲಿ
3. ಹಿಂಸಾಕೃತ್ಯಗಳನ್ನು ಒಳಗೊಂಡಂತೆ ಕಾನೂನು ಪ್ರತಿರಕ್ಷಣೆಯ ಸಂಘಟಿತ ಉಲ್ಲಂಘನೆಯ ಗುರಿ ಹೊಂದಿದ್ದರೆ
4. ಭಾರತ ದೇಶದ ಸಾರ್ವಭೌಮತ್ವ ಅಥವಾ ಅಖಂಡತೆ ಅಥವಾ ರಾಜ್ಯದ ಭದ್ರತೆಯ ಹಿತಾಸಕ್ತಿಗೆ ಪ್ರತಿಕೂಲವನ್ನುಂಟು ಮಾಡುವ ಕಾರ್ಯದಲ್ಲಿ ತೊಡಗಿದ್ದಲ್ಲಿ
5. ವಿವಿಧ ವರ್ಗದ ಜನತೆಯ ನಡುವೆ ಧರ್ಮ, ಜನಾಂಗ, ಜಾತಿ, ಭಾಷೆ, ಕೋಮು ಆಧಾರದ ಮೇಲೆ ಶತೃತ್ವ ಅಥವಾ ದ್ವೇಷದ ಭಾವನೆಗಳಿಗೆ ಪ್ರಚೋದಿಸುವ ಕಾರ್ಯಗಳಲ್ಲಿ ತೊಡಗಿದ್ದಲ್ಲಿ.
6. ಭಾರತ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಅಥವಾ ಶಾಸನಬದ್ದ ನಿಗಮದ ಅಥವಾ ರಾಜ್ಯ ಅಥವಾ ಕೇಂದ್ರ ಸರ್ಕಾರದ ಸ್ವಾಮ್ಯತ್ವದ ಯಾವುದೇ ಸಾರ್ವಜನಿಕ ಉದ್ಯಮಗಳು ಅಥವಾ ವಾಣಿಜ್ಯ/ಸಹಕಾರಿ ಉದ್ಯಮಗಳ ಸೇವೆಗಳಿಂದ ವಜಾ ಮಾಡಲ್ಪಟ್ಟಿದ್ದಲ್ಲಿ
7. ಕೇಂದ್ರ ಅಥವಾ ಯಾವುದೇ ರಾಜ್ಯದ ಲೋಕಸೇವಾ ಆಯೋಗ ಅಥವಾ ಸ್ವಾಯತ್ತ/ನೇಮಕಾತಿ ಮಂಡಳಿಗಳಿಂದ ನಡೆಸುವ ಯಾವುದೇ ಆಯ್ಕೆ ಅಥವಾ ಪರೀಕ್ಷೆಯಲ್ಲಿ ಪಾಲ್ಗೋಳ್ಳಲು ಖಾಯಂ ಆಗಿ ಬಹಿಷ್ಕೃತವಾದ ಅಥವಾ ಅನರ್ಹವಾಗಿದ್ದಲ್ಲಿ
8. ವೈದ್ಯಕೀಯವಾಗಿ ಅನರ್ಹರೆಂದು ಪರಿಗಣಿಸಲಾಗಿದ್ದಲ್ಲಿ
9. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿಯು ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ವಿವಾಹವಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗಿರುವುದಿಲ್ಲ.
10. ಯಾವುದೇ ನ್ಯಾಯಾಲಯದಿಂದ ಶಿಕ್ಷೆಗೆಗೊಳಪಟ್ಟು ಜೈಲುವಾಸ ಅನುಭವಿಸಿದ್ದರೆ
11. ಯಾವುದೇ ನ್ಯಾಯಾಲಯದಿಂದ, ಸರ್ಕಾರಗಳಿಂದ ಅಥವಾ ಸಂಘ, ಸಂಸ್ಥೆಗಳಿಂದ ನೌಕರಿಗೆ ಅರ್ಹರಲ್ಲವೆಂದು ನಿರ್ದೇಶಿಸಿದ್ದರೆ

ಈ ನೇಮಕಾತಿ ಪ್ರಕಟಣೆಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಳನ್ನು ಈ ಕಛೇರಿಯ ಕೆಲಸದ ದಿನಗಳಲ್ಲಿ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.00ರ ವರೆಗೆ ದೂರವಾಣಿ ಸಂಖ್ಯೆ: (080) 25550268 ಅಥವಾ (080) 225583061 ಇವುಗಳನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

Karnataka Co-operative Oilseeds Growers' Federation Ltd., Bangalore-560 001

(ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ–ಡಿ

(ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

**ಪ್ರಮಾಣ ಪತ್ರ**

__________ರಾಜ್ಯದ/ಕೇಂದ್ರಾಡಳಿತ ಪ್ರದೇಶದ ________ ಜಿಲ್ಲೆಯ/ವಿಭಾಗದ __________ಗ್ರಾಮ/ ಪಟ್ಟಣದ ನಿವಾಸಿಯಾದ ಶ್ರೀ/ಶ್ರೀಮತಿ ____________________________ಎಂಬುವವರ ಮಗ /ಮಗಳು/ಪತಿ/ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ _________ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ ಸೇರಿದವರಾಗಿರುತ್ತಾರೆಂದು ಪ್ರಮಾಣಿಕರಿಸಿದೆ

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ 1951

  (ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ 1966, ಹಿಮಾಚಲ್ ಪ್ರದೇಶ ರಾಜ್ಯ ರಚನಾ ಅಧಿನಿಯಮ, 1970 ಮತ್ತು ಈಶಾನ್ಯ ರಾಜ್ಯಗಳ ಪುನರ್ ರಚನಾ ಅಧಿನಿಯಮ, 1971 ರ ಮೂಲ ತಿದ್ದುಪಡಿಯಾದಂತೆ)

- ಸಂವಿಧಾನ
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ 1956
- ಸಂವಿಧಾನ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ 1978ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ 1959
- ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ ಬುಡಕಟ್ಟುಗಳ ಆದೇಶ 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

ಶ್ರೀ/ಶ್ರೀಮತಿ/ಕುಮಾರಿ __________ ಮತ್ತು / ಅಥವಾ ಅವನ/ಅವಳ ಕುಟುಂಬವು ______ರಾಜ್ಯ/ಕೇಂದ್ರಾಡಳಿತ ಪ್ರದೇಶದ ________ ಜಿಲ್ಲಾ/ವಿಭಾಗದ _____ ಗ್ರಾಮ/ಪಟ್ಟಣದ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿರುತ್ತಾರೆ.

ಸ್ಥಳ
ದಿನಾಂಕ

ಸಹಿ
ತಹಶೀಲ್ದಾರ್ ________
ಪದನಾಮ
ಕಛೇರಿಯ ಮೊಹರಿನೊಂದಿಗೆ

ಪ್ರವರ್ಗ-2, 2ಬಿ/ 3ಎ/, 3ಬಿ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ

ನಮೂನೆ-ಎಫ್

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ ಪ್ರವರ್ಗ-2, 2ಬಿ/ 3ಎ/, 3ಬಿ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ

**ಪ್ರಮಾಣ ಪತ್ರ**

___________ರಲ್ಲಿ ವಾಸವಾಗಿರುವ ಶ್ರೀ/ಶ್ರೀಮತಿ ____________ಇವರ ಮಗ/ಮಗಳು/ಪತಿ/ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ ____________ ಇವರ ಮತ್ತು ಆತನ ತಂದೆ/ತಾಯಿ/ಪೋಷಕರ/ಪತಿ/ಪತ್ನಿಯು ಸರ್ಕಾರಿ ಆದೇಶಗಳ ಸಂಖ್ಯೆ ಎಸ್.ಡಬ್ಲ್ಯೂ.ಡಿ. 225 ಬಿಸಿಎ 2000 ದಿನಾಂಕ 30/03/2002ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು

ಅಭ್ಯರ್ಥಿಯಾಗಲಿ ಅಥವಾ ಆತನ ತಂದೆ/ತಾಯಿ/ಪೋಷಕರ/ಪತಿ/ಪತ್ನಿಯಾಗಲಿ ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು

ಅಥವಾ

ಸಾರ್ವಜನಿಕರ ವಲಯ ಉದ್ಯಮದಲ್ಲಿ ತತ್ಸಮಾನ ಹುದ್ದೆಯನ್ನು ಹೊಂದಿರುವುದಿಲ್ಲ

ಅಥವಾ

ಖಾಸಗಿ ನಿಯೋಜಕರ ಕೆಳಗೆ 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 6000-11200) ಪ್ರಾರಂಭಿಕ ಹಂತ) ಕಡಿಮೆ ಇಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ ತಂದೆ/ತಾಯಿ/ಪೋಷಕರ/ಪತಿ/ಪತ್ನಿಯ ಆದಾಯವು ಆರು ಲಕ್ಷ ಮೀರುವುದಿಲ್ಲವೆಂದು

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ ತಂದೆ/ ತಾಯಿ/ಪೋಷಕರ/ಪತಿ/ ಪತ್ನಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ ತಂದೆ/ತಾಯಿ/ಪೋಷಕರ/ಪತಿ/ಪತ್ನಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶಗಳ ಸಂಖ್ಯೆ: ಎಸ್.ಡಬ್ಲ್ಯೂ.ಡಿ.225 ಬಿಸಿಎ 2000 ದಿನಾಂಕ: 30.03.2002ರನ್ವಯ ಶ್ರೀ/ಶ್ರೀಮತಿ/ಕುಮಾರಿ ______ ಇವರು _____ ಜಾತಿಗೆ ______ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್.ಡಬ್ಲ್ಯೂ.ಡಿ 225 ಬಿಸಿಎ 2000 ದಿನಾಂಕ: 30.03.2000 ರನ್ವಯ ಹಿಂದುಳಿದ ವರ್ಗಗಳ ಪ್ರವರ್ಗ _______(2ಎ, 2ಬಿ, 3ಎ, 3ಬಿ)ಗೆ ಸೇರಿರುತ್ತಾರೆ.

ಸ್ಥಳ
ದಿನಾಂಕ

ಸಹಿ
ತಹಶೀಲ್ದಾರ್ ________
ಪದನಾಮ
ಕಛೇರಿಯ ಮೊಹರಿನೊಂದಿಗೆ

ಸೂಚನೆ:

1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 148 ಬಿಸಿಎ 2015, ದಿನಾಂಕ: 04.06.2015ರಂತೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗದಿಪಡಿಸಿರುವ ಅಭ್ಯರ್ಥಿಯು ಮತ್ತು ಅವರ ತಂದೆ/ತಾಯಿ/ಪೋಷಕರ/ಪತಿ/ಪತ್ನಿಯ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Annual Income) ರೂ. 4.50 ಲಕ್ಷಗಳಿಂದ 6.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಆದುದರಿಂದ ಮೀಸಲಾತಿ ಪ್ರಮಾಣಪತ್ರವನ್ನು ನೀಡುವ ಅಧಿಕೃತ ಅಧಿಕಾರಿಯು ದಿನಾಂಕ: 04/06/2015ರ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ನೀಡತಕ್ಕದ್ದು.

2. ಈ ಮೇಲೆ ಹೇಳಲಾದ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡೇ ಸದರಿ ಮೀಸಲಾತಿಗಳನ್ನು ಕ್ಲೇಮು ಮಾಡುವ ಅಭರ್ಥಿಗಳು ಅದರಂತೆ ಜಾತಿ/ಮೀಸಲಾತಿ ಪ್ರಮಾಣ ಪತ್ರಗಳನ್ನು ಮಾಡಿಸಲು ಸೂಚಿಸಿದೆ.

ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ

ನಮೂನೆ–ಇ

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1ಕ್ಕೆ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

**ಪ್ರಮಾಣ ಪತ್ರ**

___________ಗ್ರಾಮ/ಪಟ್ಟಣದ/ನಗರದ ನಿವಾಸಿಯಾದ ಶ್ರೀ/ಶ್ರೀಮತಿ ____________ಇವರ ಮಗ/ಮಗಳು/ಪತಿ/ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ ____________ ಇವರು ಹಿಂದುಳಿದ ವರ್ಗಗಳಿಗೆ (ಪ್ರವರ್ಗ) _________ಜಾತಿಯ _________ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣಿಕರಿಸಿದೆ.

ಸ್ಥಳ
ದಿನಾಂಕ

ಸಹಿ
ತಹಶೀಲ್ದಾರ್ _________
ಪದನಾಮ
ಕಛೇರಿಯ ಮೊಹರಿನೊಂದಿಗೆ

ಪ್ರಸ್ತುತದಲ್ಲಿ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರಿಗಳಿಂದ ಪಡೆದು ಅರ್ಜಿಯೊಂದಿಗೆ ಲಗತ್ತಿಸಿ ಸಲ್ಲಿಸಬೇಕಾದ ನಿರಾಪೇಕ್ಷಣಾ / ಅನುಮತಿ ಪತ್ರದ ನಮೂನೆ

---

ಸಂಸ್ಥೆಯ ಲೆಟರ್ ಹೆಡ್‌ನಲ್ಲಿ

ಕ್ರ.ಸಂ: _______________ ದಿನಾಂಕ: _____

## ನಿರಾಪೇಕ್ಷಣಾ / ಅನುಮತಿ ಪತ್ರ

ಶ್ರೀ/ಶ್ರೀಮತಿ/ಕು _________________________________ತಂದೆ ______________________ ಇವರು ದಿನಾಂಕ ____________ರಿಂದ ____________ವರೆಗೆ ______________ ಸಂಸ್ಥೆಯಲ್ಲಿ _________ಹುದ್ದೆಯಲ್ಲಿ ಖಾಯಂ/________ ನೌಕರರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸದರಿಯವರು ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತ, ಬೆಂಗಳೂರು ಇವರು ದಿನಾಂಕ: 10.03.2023 ರ ನೇಮಕಾತಿ ಪ್ರಕಟಣೆ ಸಂಖ್ಯೆ: ಕೆಓಎಫ್/ಮಾಸ/ನೇಪ್ರ/14712022-23 ದಿ: 10.03.2023 ರ ಮೂಲಕ ಅಹ್ವಾನಿಸಿರುವ ___________ ಹುದ್ದೆಗೆ ಅರ್ಜಿ ಸಲ್ಲಿಸಲು ಈ ಸಂಸ್ಥೆ / ಇಲಾಖೆಯಿಂದ ಯಾವುದೇ ಆಕ್ಷೇಪಣೆ ಇರುವುದಿಲ್ಲ.

ನೇಮಕಾತಿ ಪ್ರಾಧಿಕಾರಿಗಳ ಪದನಾಮ
ಮೊಹರು ಮತ್ತು ಸಹಿ